Akashvani : Bangalore
Regional Bulletin In Kannada
13.07.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕೆ.ಪಿ.ಎಸ್.ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅಮಾನತುಗೊಳಿಸಿ ರಾಜ್ಯಪಾಲರ ಆದೇಶ
- ಕರ್ನಾಟಕ ಲೋಕಸೇವಾ ಆಯೋಗಕ್ಕೆ ಸುಧಾರಣೆ ತರುವ ಅಗತ್ಯವಿದೆ- ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅಭಿಮತ
- ಮುಜರಾಯಿ ದೇಗುಲಗಳಲ್ಲಿ ಹುಂಡಿ ಹಣ ಎಣಿಕೆಗೆ ಮಾರ್ಗಸೂಚಿ ಬಿಡುಗಡೆಗೊಳಿಸಿದ ರಾಜ್ಯ ಸರ್ಕಾರ
- ಉತ್ತರ ಮತ್ತು ಕಲ್ಯಾಣ ಕರ್ನಾಟಕದ ಬರಪೀಡಿತ ರೈತರಿಗೆ ಪ್ರತಿ ಎಕರೆಗೆ ೫೦ ಸಾವಿರ ಪರಿಹಾರ ನೀಡುವಂತೆ ಬಿಜೆಪಿ ಆಗ್ರಹ
- ತಮಿಳುನಾಡು ಹೈಕೋರ್ಟ್‌ನ ಗೋಹತ್ಯೆ ನಿಷೇಧ ಆದೇಶಕ್ಕೆ ಸುಪ್ರೀಂಕೋರ್ಟ್ ಮಧ್ಯಂತರ ತಡೆ

<><*<><>*><>

ಕರ್ನಾಟಕ ಲೋಕಸೇವಾ ಆಯೋಗ- ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ. ಶಿವಶಂಕರಪ್ಪ ವಿರುದ್ಧ ಮಾಡಲಾದ ಆರೋಪಗಳ ಬಗ್ಗೆ ಅಗತ್ಯ ತನಿಖೆಗಾಗಿ ಸಂವಿಧಾನದ ೩೧೭ (೧) ನೇ ವಿಧಿಯಡಿಯಲ್ಲಿ ಸುಪ್ರೀಂಕೋರ್ಟ್‌ಗೆ ಉಲ್ಲೇಖಿಸುವಂತೆ ರಾಷ್ಟ್ರಪತಿಗಳಿಗೆ ಶಿಫಾರಸ್ಸು ಮಾಡಿದ್ದಾರೆ. ಸ್ವಜನಪಕ್ಷಪಾತ ಸೇರಿದಂತೆ ಅವರ ವಿರುದ್ಧ ಕೇಳಿಬಂದಿರುವ ಆರೋಪಗಳ ಕುರಿತು ತನಿಖೆಗೆ ಶಿಫಾರಸು ಮಾಡಲಾಗಿದೆ. ಮುಂದಿನ ಆದೇಶದವರೆಗೆ ಹಿರಿಯ ಸದಸ್ಯರು ಹಂಗಾಮಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಅಧ್ಯಕ್ಷರ ಪುತ್ರಿಯೊಬ್ಬರು ತಮ್ಮ ಕುಟುಂಬದ ವಾರ್ಷಿಕ ಆದಾಯವನ್ನು ೪೦ ಸಾವಿರ ರೂಪಾಯಿ ಎಂದು ಘೋಷಿಸುವ ಮೂಲಕ ಆದಾಯ ಮತ್ತು ಜಾತಿ ಪ್ರಮಾಣಪತ್ರವನ್ನು ಪಡೆದುಕೊಂಡಿದ್ದಾರೆ ಎಂಬ ಆರೋಪವು ಕೇಳಿಬಂದಿದೆ.

<><*<><>*><>

ಯುವಕರ ಭವಿಷ್ಯದ ದೃಷ್ಟಿಯಿಂದ ಕರ್ನಾಟಕ ಲೋಕಸೇವಾ ಆಯೋಗ- ಕೆಪಿಎಸ್‌ಸಿಗೆ ಸುಧಾರಣೆ ತರುವ ಅಗತ್ಯವಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ಅಧಿಕಾರಿ, ಇಲ್ಲವೆ ಸಂಸ್ಥೆ ಮೇಲೆ ಅನುಮಾನ ಬಂದಾಗ ಸ್ವಯಂ ಪ್ರೇರಣೆಯಿಂದ ರಾಜೀನಾಮೆ ನೀಡಿ, ತನಿಖೆಗೆ ಅವಕಾಶ

ನೀಡಬೇಕು ಎಂದು ಹೇಳಿದ್ದಾರೆ. ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಮಾನತುಗೊಳಿಸಿರುವ ಆದೇಶವನ್ನು ಪ್ರಿಯಾಂಕ್ ಖರ್ಗೆ ಸ್ವಾಗತಿಸಿದ್ದಾರೆ.

ಧ್ವನಿ: ಪ್ರಿಯಾಂಕ್ ಖರ್ಗೆ ( 35 ಸೆಕೆಂಡ್ಸ್)

<><*<><>*><>

ರಾಜ್ಯದ ಮುಜರಾಯಿ ದೇವಾಲಯಗಳಲ್ಲಿ ಹುಂಡಿಹಣ ಎಣಿಕೆಗೆ ಸರ್ಕಾರ ಮಾರ್ಗಸೂಚಿ ಬಿಡುಗಡೆ ಮಾಡಿದೆ. ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಠಾರಿಯಾ ಹುಂಡಿ, ನಗದು, ಚಿನ್ನ, ಬೆಳ್ಳಿ ಭದ್ರತೆಗೆ ಸಂಬಂಧಿಸಿದಂತೆ ರಾಜ್ಯದ ಧಾರ್ಮಿಕ ದತ್ತಿ ಇಲಾಖೆ, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿ, ಆದೇಶ ಹೊರಡಿಸಿದ್ದಾರೆ. ಭಕ್ತರ ಅನುಕೂಲಕ್ಕಾಗಿ ಮೂಲಭೂತ ಸೌಕರ್ಯಗಳಾದ ಶೌಚಾಲಯ ವ್ಯವಸ್ಥೆ, ಶುದ್ಧಕುಡಿಯುವ ನೀರಿನ ವ್ಯವಸ್ಥೆ, ನೆರಳಿನ ವ್ಯವಸ್ಥೆ, ಸಿಸಿ ಟಿವಿ ಅಳವಡಿಕೆ, ಭಕ್ತರಿಗೆ ತಂಗಲು ಉತ್ತಮ ಕೊಠಡಿಗಳ ವ್ಯವಸ್ಥೆ ಮಾಡುವಂತೆ ಸೂಚಿಸಿದ್ದಾರೆ. ಹುಂಡಿ ಇರುವ ಕಡೆ ಕ್ಯೂಆರ್ ಕೋಡ್ ಅಳವಡಿಸುವಂತೆ ಸಲಹೆ ನೀಡಿದ್ದಾರೆ. ಹುಂಡಿ ಎಣಿಕೆಯನ್ನು ಸಂಬಂಧಪಟ್ಟ ತಹಶೀಲ್ದಾರ್ ಮೇಲ್ವಿಚಾರಣೆಯಲ್ಲಿ ನಡೆಸುವಂತೆ ತಿಳಿಸಿದ್ದಾರೆ. ಹುಂಡಿ ತೆರೆಯುವುದರಿಂದ ಹಿಡಿದು, ಹುಂಡಿ ಎಣಿಕೆ ಮಾಡಿ, ಬ್ಯಾಂಕ್‌ಗೆ ಹಸ್ತಾಂತರಿಸುವವರೆಗೆ ಕಡ್ಡಾಯವಾಗಿ ಸಂಪೂರ್ಣ ವೀಡಿಯೋ ಚಿತ್ರೀಕರಣ ಮಾಡುವಂತೆ ಆದೇಶದಲ್ಲಿ ತಿಳಿಸಿದ್ದಾರೆ.

<><*<><>*><>

ಉತ್ತರ ಹಾಗೂ ಕಲ್ಯಾಣ ಕರ್ನಾಟಕದ ಬೀದರ್, ರಾಯಚೂರು, ಚಿತ್ರದುರ್ಗ, ಯಾದಗಿರಿ ಜಿಲ್ಲೆಗಳಲ್ಲಿ ಮಳೆಯ ಅಭಾವದಿಂದ ಬರಗಾಲ ಆವರಿಸಿದೆ. ಬರಪೀಡಿತ ಪ್ರದೇಶಗಳಲ್ಲಿ ತೀವ್ರ ಸಂಕಷ್ಟದಲ್ಲಿರುವ ರೈತರನ್ನು ಸ್ಪಂದಿಸಿ, ರಾಜ್ಯ ಸರ್ಕಾರ ರೈತರಿಗೆ ಪ್ರತಿ ಎಕರೆಗೆ ೫೦ ಸಾವಿರ ರೂಪಾಯಿ ಪರಿಹಾರ ಒದಗಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ. ಬೀದರ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆ ಬಾರದೆ ಈ ಭಾಗದಲ್ಲಿ ೩೦ ಲಕ್ಷಕ್ಕೂ ಹೆಚ್ಚು ಎಕರೆ ಕೃಷಿ ಭೂಮಿಯಲ್ಲಿ ಬಿತ್ತನೆಯಾಗದೆ, ರೈತರು ಪರದಾಡುತ್ತಿದ್ದಾರೆ. ತೊಗರಿ, ಸೂರ್ಯಕಾಂತಿ ಮತ್ತು ಹತ್ತಿಯಂತಹ ಪ್ರಮುಖ ಬೆಳೆಗಳನ್ನು ಬಿತ್ತನೆ ಮಾಡಲು ಸಾಧ್ಯವಾಗದೆ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

<><*<><>*><>

ಕಲ್ಯಾಣ ಕರ್ನಾಟಕದಲ್ಲಿ ೧೬ ಸಾವಿರಕ್ಕೂ ಹೆಚ್ಚು ಭ್ರೂಣಗಳೇ ನಾಪತ್ತೆಯಾಗಿದೆ ಎಂದು ಪ್ರತಿಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ತಾಯಂದಿರ ಮತ್ತು ಹೆಣ್ಣುಮಕ್ಕಳ ಬಗ್ಗೆ ಈ ಸರ್ಕಾರಕ್ಕೆ ಸ್ವಲ್ಪವೂ

ಕನಿಕರವಿಲ್ಲ ಎಂದು ದೂರಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಲ್ಲಿ ೧೭ ಸಾವಿರದ ೧೧೭ ಭ್ರೂಣಗಳ ಹತ್ಯೆಗೆ ಸಂಬಂಧಿಸಿದಂತೆ ತನಿಖೆ ನಡೆಸುವಂತೆ ಒತ್ತಾಯಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಕ್ಷಣವೇ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆಗೆ ಆದೇಶಿಸುವಂತೆ ಆಗ್ರಹಿಸಿದ್ದಾರೆ.

<><*<><>*><>

ತಮಿಳುನಾಡಿನಲ್ಲಿ ಬಕ್ರೀದ್ ಹಬ್ಬ ಸೇರಿದಂತೆ ಯಾವುದೇ ದಿನಗಳಲ್ಲಿ ಗೋಹತ್ಯೆ ಮಾಡದಂತೆ ಸಂಪೂರ್ಣ ನಿಷೇಧ ಹೇರಿ ಮದ್ರಾಸ್ ಹೈಕೋರ್ಟ್ ನೀಡಿದ್ದ ಆದೇಶಕ್ಕೆ ಸುಪ್ರೀಂಕೋರ್ಟ್ ಮಧ್ಯಂತರ ತಡೆ ನೀಡಿದೆ. ಮದ್ರಾಸ್ ಹೈಕೋರ್ಟ್‌ನ ನಿರ್ದೇಶನವನ್ನು ಪ್ರಶ್ನಿಸಿ, ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಮೇಲ್ಮನವಿಯ ವಿಚಾರಣೆ ನಡೆಸಿದ ಸರ್ವೋಚ್ಚ ನ್ಯಾಯಾಲಯ, ಈ ಮಹತ್ವದ ತೀರ್ಪು ಪ್ರಕಟಿಸಿದೆ. ಸುಪ್ರೀಂಕೋರ್ಟ್‌ನ ನ್ಯಾಯಮೂರ್ತಿಗಳಾದ ಜಸ್ಟಿಸ್ ವಿಕ್ರಮ್ ನಾಥ್ ಮತ್ತು ಜಸ್ಟಿಸ್ ಸಂದೀಪ್ ಮೆಹ್ತಾ ಅವರನ್ನೊಳಗೊಂಡ ದ್ವಿಸದಸ್ಯ ಪೀಠವು, ಹೈಕೋರ್ಟ್ ಆದೇಶಕ್ಕೆ ತಡೆ ನೀಡಿದ್ದು, ರಾಜ್ಯದಲ್ಲಿದ್ದ ಹಳೆಯ ನಿಯಂತ್ರಿತ ಗೋಹತ್ಯೆ ನಿಯಮವೇ ಸದ್ಯಕ್ಕೆ ಮುಂದುವರಿಯಲಿದೆ ಎಂದು ಸ್ಪಷ್ಟಪಡಿಸಿದೆ.

<><*<><>*><>

ತುಮಕೂರು ವಿಶ್ವವಿದ್ಯಾಲಯದಲ್ಲಿ ಪಿಎಂ-ಉಷಾ ಯೋಜನೆಯಡಿ ಶೈಕ್ಷಣಿಕ ಭವನ ನಿರ್ಮಾಣಕ್ಕೆ ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ಸಚಿವ ವಿ.ಸೋಮಣ್ಣ ಇಂದು ಚಾಲನೆ ನೀಡಿದರು.

ಬಿದರಕಟ್ಟೆ ಕ್ಯಾಂಪಸ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಿಲ್ಲೆಗೊಂದು ವಿಶ್ವವಿದ್ಯಾಲಯ ಸ್ಥಾಪಿಸುವ ಮೂಲಕ ಕೇಂದ್ರ ಮತ್ತು ರಾಜ್ಯ ಸರ್ಕಾರ ಗ್ರಾಮೀಣ ಪ್ರದೇಶದಲ್ಲಿ ಶೈಕ್ಷಣಿಕ ಪ್ರಗತಿ ಸಾಧಿಸಲು ಉತ್ತೇಜನ ನೀಡಿದೆ ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರ ವಿಶ್ವವಿದ್ಯಾಲಯಗಳಲ್ಲಿ ಗುಣಮಟ್ಟದ ಶಿಕ್ಷಣ ಹಾಗೂ ಮೂಲಸೌಲಭ್ಯ ಅಭಿವೃದ್ಧಿಗೆ ಆದ್ಯತೆ ನೀಡಲು ಪಿಎಂ ಉಷಾ ಯೋಜನೆ ಜಾರಿಗೆ ತಂದಿದೆ. ತುಮಕೂರು ವಿಶ್ವವಿದ್ಯಾಲಯಕ್ಕೆ ೨೦ ಕೋಟಿ ರೂಪಾಯಿ ಅನುದಾನ ನೀಡಲಾಗಿದ್ದು, ಹೆಚ್ಚುವರಿಯಾಗಿ ೪೦ ಕೋಟಿ ರೂಪಾಯಿ ಅನುದಾನ ನೀಡಲು ಕ್ರಮವಹಿಸಲಾಗಿದೆ ಎಂದು ಹೇಳಿದ್ದಾರೆ. ರಾಜ್ಯದ ೪ ವಿಶ್ವವಿದ್ಯಾಲಯಗಳಿಗೆ ಪಿಎಂ ಉಷಾ ಯೋಜನೆಯಡಿ ಅನುದಾನ ನೀಡಲಾಗಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಕರೆ ನೀಡಿದ್ದಾರೆ. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಕುಲಪತಿ ಪ್ರೊಫೆಸರ್ ವೆಂಕಟೇಶ್ವರಲು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><*<><>*><>

ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಮಾಜಿ ರಾಜ್ಯಸಭಾ ಸದಸ್ಯ ಹೆಚ್. ಹನುಮಂತಪ್ಪ ಅವರು ವಯೋಸಹಜ ಅನಾರೋಗ್ಯದಿಂದ ನಿನ್ನೆ ನಿಧನರಾಗಿದ್ದಾರೆ. ಅವರಿಗೆ ೯೫ ವರ್ಷ ವಯಸ್ಸಾಗಿತ್ತು.

ಹನುಮಂತಪ್ಪ ಅವರು ಮೂರು ಬಾರಿ ರಾಜ್ಯಸಭಾ ಸದಸ್ಯರಾಗಿ, ಎರಡು ಬಾರಿ ಕೇಂದ್ರ ರೇಷ್ಮೆ ಮಂಡಳಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು. ಅವರ ನಿಧನಕ್ಕೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

<><*<><>*><>

ವಿಜಯನಗರ ಜಿಲ್ಲೆಯಾದ್ಯಂತ ಈವರೆಗೆ ಶೇಕಡ ೯೯ ರಷ್ಟು  ಗಣತಿ ನಮೂನೆ ನೀಡಲಾಗಿದ್ದು, ಡಿಜಿಟಲಿಕರಣ ಮಾಡುವ ಪ್ರಕ್ರಿಯೆಯು ಸಹ ವೇಗವಾಗಿ ನಡೆಯುತ್ತಿದೆ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನೋಂಗಜಾಯ್ ಮಹಮ್ಮದ್ ಅಲಿ ಅಕ್ರಂ ಶಾ ತಿಳಿಸಿದ್ದಾರೆ.  ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲೂಕಿನಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯು ತೀವ್ರಗತಿಯಲ್ಲ ಸಾಗುತ್ತಿದ್ದು  ಎಲ್ಲಾ ೨೫೩ ಮತಗಟ್ಟೆ ಕೇಂದ್ರಗಳಲ್ಲಿ ಒಟ್ಟು ೨ ಲಕ್ಷ ೧೨ ಸಾವಿರದ ೬೯೬ ಗಣತಿ ನಮೂನೆಗಳನ್ನು ವಿತರಣೆ ಮಾಡಲಾಗಿದ್ದು, ಶೇಕಡ ೧೦೦ ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಆಹಾರ ಇಲಾಖೆಯ ಉಪನಿರ್ದೇಶಕ ಹಾಗೂ ತಾಲೂಕು ಮತದಾರ ನೋಂದಣಾಧಿಕಾರಿ ಎಂ. ಮಲ್ಲಿಕಾರ್ಜುನ್ ತಿಳಿಸಿದ್ದಾರೆ.

<><*<><>*><>

ಚಿತ್ರದುರ್ಗ ಜಿಲ್ಲೆಯಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದು, ಇಪ್ಪತ್ತೆಂಟು ಮಂದಿ ಗಾಯಗೊಂಡಿದ್ದಾರೆ, ಮೊಳಕಾಲ್ಮೂರು ತಾಲೂಕಿನ ಕೋನಾಪುರ ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ ೧೫೦-ಎ ರಸ್ತೆಯಲ್ಲಿ ಈ ದುರ್ಘಟನೆ ಸಂಭವಿಸಿದೆ. ಚಲಿಸುತ್ತಿದ್ದ ಖಾಸಗಿ ಬಸ್, ಚಾಲಕನ ನಿಯಂತ್ರಣ ತಪ್ಪಿ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಬಸ್ ಸಂಪೂರ್ಣ ಜಖಂಗೊಂಡಿದೆ. ವಿಷಯ ತಿಳಿಯುತ್ತಿದ್ದಂತೆ ರಾಂಪುರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಈ ಕುರಿತು ಪ್ರಕರಣ ದಾಖಲಿಸಿಕೊಂಡಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು  <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ  <>*><>